MAY 10, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ರಾಜ್ಯ ಪ್ರವಾಸ ಕೈಗೊಂಡಿದ್ದಾರೆ. ಬೆಂಗಳೂರು ಎಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ತಲುಪಿದ ಪ್ರಧಾನಮಂತ್ರಿ ಅವರನ್ನು, ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಗಣ್ಯರು ಸ್ವಾಗತಿಸಿ, ಬರಮಾಡಿಕೊಂಡರು. ಪ್ರಸ್ತುತ, ಕನಕಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರಕ್ಕೆ ಅವರು ತಲುಪಿದ್ದು, 45 ನೇ ವರ್ಷಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ. ಇದಕ್ಕೂ ಮೊದಲು ಬೆಂಗಳೂರಿನಲ್ಲಿ ಆಯೋಜಿತ ಬೃಹತ್ ಅಭಿನಂದನಾ ಸಮಾರಂಭವನ್ನು, ಉದ್ದೇಶಿಸಿ ಮಾತನಾಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಮೇ 10 ಚಾರಿತ್ರಿಕ ದಿನವಾಗಿದೆ. 1857 ರ ಈ ದಿನದಂದು, ದೇಶದ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಕಿಡಿಯು ಹತ್ತಿತು, ಬಳಿಕ ಅದು ಜ್ವಾಲೆಯಾಗಿ ವ್ಯಾಪಿಸಿ, ದೇಶವನ್ನು ಗುಲಾಮಗಿರಿಯಿಂದ ಮುಕ್ತಿಗೊಳಿಸಿತು ಎಂದರು. ನಾಳೆ, 11 ರಂದು ಗುಜರಾತಿನ ಸೋಮನಾಥ ದೇಗುಲ, ಪುನರ ನಿರ್ಮಾಣದ 75 ನೇ ವಾರ್ಷಿಕೋತ್ಸವದಲ್ಲಿ ಪಾಲ್ಗೊಳ್ಳುವುದಾಗಿ ತಿಳಿಸಿದರು. ಪಶ್ಚಿಮ ಏಷ್ಯಾದಲ್ಲಿ ನಿರ್ಮಾಣಗೊಂಡ ಸಂದಿಗ್ಧ ಪರಿಸ್ಥಿತಿ ಬಗ್ಗೆ ಉಲ್ಲೇಖಿಸಿದ ಅವರು, ವಿಶ್ವದ ಹಲವು ರಾಷ್ಟ್ರಗಳ ಮೇಲೆ ಇದು ಪರಿಣಾಮ ಬೀರಿದೆ. ದೇಶದ ಹಿತದೃಷ್ಟಿಯಿಂದ ಎಲ್ಲರೂ ಒಗ್ಗೂಡಬೇಕಿದೆ ಎಂದರು.

<><><>

ಕಂದಾಯ ಹಾಗೂ ಪಂಚಾಯತ್ ರಾಜ್ ಇಲಾಖೆಗಳ ಸೇವೆ ಒದಗಿಸುವಲ್ಲಿ, ಕರ್ನಾಟಕ ರಾಜ್ಯ, ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ ಖರ್ಗೆ ಹೇಳಿದರು. ಕಲಬುರಗಿ ನಗರದ ಡಾಕ್ಟರ ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ, ಕಂದಾಯ ಇಲಾಖೆಯ ವಿವಿಧ ಯೋಜನೆಗಳ, ಫಲಾನುಭವಿಗಳಿಗೆ ಹಕ್ಕುಪತ್ರ, ಪಹಣಿ, ಪಿಂಚಣಿ ಸೇರಿದಂತೆ ಸೌಲಭ್ಯ ವಿತರಣಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. 'ಭೂ ಗ್ಯಾರಂಟಿ', ಸರ್ಕಾರದ ಆರನೇ ಗ್ಯಾರಂಟಿಯಾಗಿದೆ ಎಂದರು. ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಮಾತನಾಡಿ, ಕಂದಾಯ ಗ್ರಾಮ ಯೋಜನೆಯಡಿ, ಕಲಬುರಗಿ ಜಿಲ್ಲೆಯಲ್ಲಿ 368 ಗ್ರಾಮಗಳನ್ನು ಗುರುತಿಸಿ, ಅದರಲ್ಲಿ 330 ಗ್ರಾಮಗಳನ್ನು ಘೋಷಿಸಲಾಗಿದೆ. 6 ಸಾವಿರದ 60 ಡಿಜಿಟಲ್ ಹಕ್ಕುಪತ್ರಗಳನ್ನು ವಿತರಿಸಲಾಗಿದೆ. 23 ಸಾವಿರದ 447 ಪಹಣಿ ತಿದ್ದುಪಡಿ ಮಾಡಿಕೊಡಲಾಗಿದೆ ಎಂದರು.

<><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ, ಜಾನುವಾರುಗಳಿಗೆ ಕಾಲು ಬಾಯಿ ಜ್ವರದ ಲಸಿಕಾಕರಣ ಅಭಿಯಾನ ಜರುಗುತ್ತಿದೆ. ಈ ತಿಂಗಳ 22 ರ ವರೆಗೆ ನಡೆಯಲಿರುವ, 9 ನೇ ಸುತ್ತಿನ ಲಸಿಕಾಕರಣ ಅಭಿಯಾನದ ಪ್ರಗತಿ ಕುರಿತು ಪ್ರದೇಶ

ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಬೆಳಗಾವಿ ಜಿಲ್ಲೆ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಉಪ ನಿರ್ದೇಶಕರಾದ ಡಾಕ್ಟರ ರವಿ ಸಾಲಿಗೌಡರ್. .

<><><>

ಡಾಕ್ಟರ ರವಿ ಸಾಲಿಗೌಡರ ಧ್ವನಿ- 42 ಸೆಕೆಂದುಗಳು

<><><>

ಅರಣ್ಯ ಇಲಾಖೆ, ಸ್ಥಳೀಯ ಪ್ರಜಾತಿಯ ಗಿಡಗಳನ್ನು ನೆಟ್ಟು, ಅರಣ್ಯೀಕರಣವನ್ನು ಪ್ರೋತ್ಸಾಹಿಸುತ್ತಿದೆ ಎಂದು ಪರಿಸರ, ಜೀವಿಶಾಸ್ತ್ರ ಮತ್ತು ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆ ಸವಾಲಿನ ನಡುವೆ, ನಗರ ಪ್ರದೇಶಗಳ ಸಮೀಪದ ಅರಣ್ಯ ಭೂಮಿಗಳನ್ನು ಉಳಿಸಿ, ಬೆಳೆಸುವುದು ಅತ್ಯಗತ್ಯವಾಗಿದೆ. ಪ್ರಕೃತಿ ಹಾಗೂ ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿ ಎಂದು ಹೇಳಿದ್ದಾರೆ.

<><><>

ರಾಜ್ಯ ಯೋಜನಾ ಮತ್ತು ಸಾಂಖ್ಯಿಕ ಖಾತೆ ಸಚಿವರಾಗಿದ್ದ ಡಿ.ಸುಧಾಕರ್, ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ವಿಪಕ್ಷ ನಾಯಕ ಆರ್.ಅಶೋಕ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಸೇರಿದಂತೆ ಗಣ್ಯರು ಕಂಬನಿ ಮಿಡಿದಿದ್ದು, ಕುಟುಂಬಕ್ಕೆ ಸಂತಾಪ ಸೂಚಿಸಿದ್ದಾರೆ. 'ಜನ ಸೇವೆಯಲ್ಲಿ ಅಪಾರ ಕಾಳಜಿ ಹಾಗೂ ಬದ್ಧತೆ ಹೊಂದಿದ್ದ ವ್ಯಕ್ತಿ ಸುಧಾಕರ್, ಇಂಥವರು ಇನ್ನಷ್ಟು ಕಾಲ ಜನರ ನಡುವೆ ಇರಬೇಕಿತ್ತು. ವೈದ್ಯರ ನಿರಂತರ ಪ್ರಯತ್ನ, ಎಲ್ಲರ ಹಾರೈಕೆಯ ಹೊರತಾಗಿಯೂ ಅವರು ನಮ್ಮನ್ನಗಲಿದ್ದಾರೆ. ಇದೊಂದು ಅತ್ಯಂತ ನೋವಿನ ಗಳಿಗೆಯಾಗಿದೆ, ಅವರ ಆತ್ಮಕ್ಕೆ ಶಾಂತಿ ಸಿಗಲಿ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

<><><>

ಓದಿಕೊಳ್ಳುವ ಕಥೆಗಳಿಗಿಂತ, ಲೇಖಕರೇ ಓದಿ ಹೇಳುವ ಕಥೆಗಳು ಹೆಚ್ಚು ಪರಿಣಾಮಕಾರಿ ಎಂದು ಕೇಂದ್ರ ಸಾಹಿತ್ಯ ಅಕಾದೆಮಿ ಸದಸ್ಯ ಡಾಕ್ಟರ ಬಸವರಾಜ ಸಾದರ ಹೇಳಿದರು. ಕಲಬುರಗಿ ಆಕಾಶವಾಣಿ ಕೇಂದ್ರದ ಸಹಯೋಗದಲ್ಲಿ, ಕೇಂದ್ರ ಸಾಹಿತ್ಯ ಅಕಾದೆಮಿ ಆಯೋಜಿಸಿದ, 'ಕೇಳುಕಥೆ' ಕಾರ್ಯಕ್ರಮದ ಸಮಾರೋಪದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಎಚ್.ಟಿ ಪೋತೆ, ಸಿದ್ಧರಾಮ ಹೊನ್ಕಲ್ ಸೇರಿದಂತೆ, ಸಾಹಿತ್ಯಾಸಕ್ತರು ತಮ್ಮ ಸಣ್ಣಕಥೆಗಳನ್ನು ವಾಚಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>